**ಪಶ್ಚಿಮ ವಲಯ ವ್ಯಾಪ್ತಿಯ, ಮಲ್ಲೇಶ್ವರಂ ಉಪವಿಭಾಗದ ಗಾಯತ್ರಿನಗರ ವಾರ್ಡ್-76ರಲ್ಲಿ ದಿನಾಂಕ: 05-02-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ**

**ಸಭಾ ನಡವಳಿಗಳು.**

**ವಾರ್ಡ್ ಸಂಖ್ಯೆ-76 ಗಾಯತ್ರಿನಗರ** **ಸಮಯ ಮಧ್ಯಾಹ್ನ ಘಂಟೆಗೆ**

ದಿನಾಂಕ: 05-02-2022 ರಂದು ವಾರ್ಡ್ ಸಂಖ್ಯೆ: 76ರ ಫೆಬ್ರವರಿ ಮಾಹೆಯ ವಾರ್ಡ್ ಸಮಿತಿ ಸಭೆಯು ನಡೆಯಿತು. ಸದರಿ ಸಭೆಯಲ್ಲಿ ವಾರ್ಡ್ ಸಮಿತಿ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು. ವಾರ್ಡ್ ಸಂಖ್ಯೆ: 76ರ ಸಹಾಯಕ ಅಭಿಯಂತರರು ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಎಲ್ಲರಿಗೂ ಸ್ವಾಗತವನ್ನು ಕೋರಿದರು ಹಾಗೂ ಸದಸ್ಯರುಗಳೆಲ್ಲರ ಕಿರು ವಿವರ ತಿಳಿಸಿ, ಮಾಸ್ಕ್ ಧರಿಸಿ ಸಾಮಾಜಿಕ ಅಂತರ ಕಾಯ್ದುಯಕೊಂಡು ಸಭೆ ನಡೆಸಲು ಕೋರಿದರು.

**ಸಭೆಗೆ ಹಾಜರಿದ್ದವರು :**

| | |
|---|---|
| 1 | ಶ್ರೀ ಚಂದ್ರಶೇಖರ್. ಹೆಚ್.ಆರ್, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್-76 ಗಾಯತ್ರಿನಗರ |
| 2 | ಶ್ರೀ ಚಿಕ್ಕಗೂಳಿಗೌಡ.ಜೆ.ಜಿ, ಸಹಾಯಕ ಅಭಿಯಂತರರು, ವಾರ್ಡ್-76 ಗಾಯತ್ರಿನಗರ ಹಾಗೂ ಕಾರ್ಯದರ್ಶಿ |
| 3 | ಶ್ರೀ ಕನಕರಾಜು, ಕಂದಾಯ ಪರಿವೀಕ್ಷಕರು |
| 4 | ಶ್ರೀ ರವಿ, ಮೌಲ್ಯಮಾಪಕರು |
| 5 | ಶ್ರೀಮತಿ ಶಾರದಾ ಬಾಯಿ, |
| 6 | ಡಾ॥ ಅಂಜನಾ, ಆರೋಗ್ಯ ಅಧಿಕಾರಿ |
| 7 | ಶ್ರೀ ಆರ್.ಸಂತೋಷ್, ಕೆಲಸ ಪರಿವೀಕ್ಷಕರು |
| 8 | ಶ್ರೀ ಮಂಜುನಾಥ್, ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 9 | ಶ್ರೀಮತಿ ಕೃಪಾ ಪ್ರಕಾಶ್, ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 10 | ಶ್ರೀ ಸಂತೋಷ್, ವಾರ್ಡ್ ವೆಲ್‌ಫೇರ್ ಕಮಿಟಿ ಸದಸ್ಯರು |
| 11 | ಶ್ರೀ ರಂಗನಾಥ್, ಬೆಸ್ಕಾಂ, ಜೆ.ಇ |
| 12 | ಶ್ರೀ ಸಿದ್ದರಾಜು, ಬಿ.ಡಬ್ಲ್ಯೂಎಸ್ಎಸ್‌ಬಿ |
| 13 | ಶ್ರೀ ಈಶ್ವರ್ ಗೌಡ, ವಾರ್ಡ್ ಅಧ್ಯಕ್ಷ |
| 14 | ಶ್ರೀ ಗೋವಿಂದರಾಜು, ಆರೋಗ್ಯ ಪರಿವೀಕ್ಷಕರು |

ಸದರಿ ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

- ಶ್ರೀ ಚಂದ್ರಶೇಖರ್.ಹೆಚ್.ಆರ್ ನೋಡಲ್ ಅಧಿಕಾರಿಗಳು ವಾರ್ಡ್-76 ಇವರು ಸಭೆಯನ್ನು ಮುಂದುವರೆಸಲು ಸೂಚಿಸಿದರು.

**ಕಂದಾಯ ಇಲಾಖೆ :**

- ಸಭೆಯಲ್ಲಿ ಹಾಜರಿದ್ದ ಕಂದಾಯ ಅಧಿಕಾರಿಗಳು ಕಂದಾಯವನ್ನು ವಸೂಲಿ ಮಾಡಲಾಗುತ್ತಿದೆ ಎಂದು ತಿಳಿಸಿದರು. ಕಂದಾಯವನ್ನು ವಸೂಲಿ ಮಾಡಲು ಟಾರ್ಗೆಟ್ ಫಿಕ್ಸ್ ಮಾಡಲಾಗಿದೆ ಎಂದು ತಿಳಿಸಿದರು. ಕಂದಾಯ ಪಾವತಿಸದವರಿಗೆ ನೋಟೀಸ್ ಜಾರಿ ಮಾಡಿ ಕಂದಾಯ ವಸೂಲಿ ಮಾಡುವಂತೆ ಸಭೆಯಲ್ಲಿ ಸೂಚಿಸಲಾಯಿತು.

**ಆರೋಗ್ಯ ಇಲಾಖೆ :**

- ಸಭೆಯಲ್ಲಿ ಹಾಜರಿದ್ದ ಆರೋಗ್ಯಾಧಿಕಾರಿಗಳು ಕೋವಿಡ್-19ನ ಪ್ರಕರಣಗಳು ಕಮ್ಮಿಯಾಗಿತ್ತಿವೆ ಎಂದು ತಿಳಿಸಿದರು. ಜ್ವರ, ಕೆಮ್ಮು, ನೆಗಡಿ ಎಂದು ಬರುವವರಿಗೆ ಕೋವಿಡ್ ಟೆಸ್ಟ್ ನಡೆಸಲಾಗುತ್ತಿದೆ ಎಂದು ತಿಳಿಸಿದರು. ಹೋಂ ಐಸೋಲೇಶನ್‌ನಲ್ಲಿ 151 ಜನ ಆಸ್ಪತ್ರೆಗೆ ದಾಖಲಾದ ಪ್ರಕರಣಗಳು 14 ಹಾಗೂ ಸತ್ತಿದ್ದು 1 ಎಂದು ತಿಳಿಸಿದರು. ಸ್ಕೂಲ್‌ನ ವಿದ್ಯಾರ್ಥಿಗಳಿಗೆ ವ್ಯಾಕ್ಸಿನೇಷನ್ ನೀಡಲಾಗಿದೆ ಎಂದು ತಿಳಿಸಿದರು. ವ್ಯಾಕ್ಸಿನೇಷನ್‌ನನ್ನು ನಿರಂತರವಾಗಿ ನೀಡಲಾಗುತ್ತಿದೆ ಎಂದು ತಿಳಿಸಿದರು. ಹೋಂ ಐಸೋಲೇಶನ್‌ನಲ್ಲಿರುವವರಿಗೆ ಔಷಧಿ ಸರಬರಾಜು ಮಾಡಲಾಗುತ್ತಿದೆ ಎಂದು ತಿಳಿಸಿದರು.

**ಆರೋಗ್ಯ ಇಲಾಖೆ (ಘನತ್ಯಾಜ್ಯ):**

- ಸಭೆಯಲ್ಲಿ ಹಾಜರಿದ್ದ ಆರೋಗ್ಯಾಧಿಕಾರಿಗಳು ಪ್ರತಿ ದಿನ ಮನೆ ಮನೆಯಿಂದ ಘನತ್ಯಾಜ್ಯವನ್ನು ಶೇಖರಿಸುತ್ತಿದ್ದು, ಪ್ರತಿ ದಿನ 12 ಟನ್ ಘನತ್ಯಾಜ್ಯ ಬರುತ್ತಿದೆ ಎಂದು ತಿಳಿಸಿದರು. ಸಗ್ರಿಗೇಷನ್ ಮಾಡುವುದರಿಂದ ವೆಟ್‌ವೇಸ್ಟ್‌ನಿಂದ ಗೊಬ್ಬರವನ್ನು ತಯಾರಿಸಲಾಗುವುದು ಇದರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಆದಾಯ ಬರುವುದೆಂದು ತಿಳಿಸಿದರು. ಡ್ರೈವೇಸ್ಟ್‌ನ ಸೆಂಟರ್ ಇದ್ದು ಡ್ರೈವೇಸ್ಟ್‌ನ ಶೇಖರಿಸುತ್ತಿದೆ ಎಂದು ತಿಳಿಸಿದರು. ಗಾಯತ್ರಿನಗರ ವ್ಯಾಪ್ತಿಯಲ್ಲಿ ಕಮ್ಮಿ ಇದ್ದು ಜನಸಂಖ್ಯೆ ಜಾಸ್ತಿ ಇರುವುದರಿಂದ ಘನತ್ಯಾಜ್ಯವು ಹೆಚ್ಚು ಬರುವುದರಿಂದ ಪೌರಕಾರ್ಮಿಕ ಅಭಾವ ಇದ್ದು ಪೌರಕಾರ್ಮಿಕರನ್ನು ನಿಯೋಜಿಸಿಕೊಳ್ಳುವಂತೆ ಸಭೆಯಲ್ಲಿ ಸೂಚಿಸಲಾಯಿತು.

**ಮಾರ್ಷಲ್‌ರವರು:**

- ಕಸವನ್ನು ಸಂಗ್ರಹಿಸುವಾಗ ಸೆಗ್ರಿಗೇಶನ್ ಮಾಡಿ ನೀಡುವಂತೆ ಜನಗಳಿಗೆ awareness ಮಾಡಿಸಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು.

**BWSSB ಇಲಾಖೆ:**

- ರಸ್ತೆಯಲ್ಲಿ ಪೈಪ್‌ಪೈನ್ ಅಳವಡಿಸುವ ಕಾಮಗಾರಿ ನಡೆಯುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು.

**BESCOM ಇಲಾಖೆ:**

- ಯಾವುದೇ ದೂರುಗಳಲ್ಲವೆಂದು ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಕಾರ್ಯದರ್ಶಿಯವರು ವಂದಾನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ,
ಸಹಾಯಕ ಅಭಿಯಂತರರು, ವಾರ್ಡ್-76
ಗಾಯತ್ರಿನಗರ, ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ

ಅಧ್ಯಕ್ಷರು
ನೋಡಲ್ ಅಧಿಕಾರಿಗಳು, ವಾರ್ಡ್-76
ಮಲ್ಲೇಶ್ವರಂ ಉಪ ವಿಭಾಗ, ಬಿಬಿಎಂಪಿ